ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

3

ಇಲಾಖೆ / ವಿಷಯ : DEPARTMENT / SUBJECT: ಗೃಹ- ಸಿ.ಡಿ. ಪ್ರಕರಣ

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ     ದಿನಾಂಕ : DATE : 4/4/2021

# ಡಿ.ಸುಧಾಕರ್‌ಗೆ ಸಿಡಿ ಕಂಟಕ

4/4/21

ಬೆಂಗಳೂರು: ಮಾಜಿ ಸಚಿವ ರಮೇಶ್ ಜಾರಕಿಹೊಳಿ ಸಿಡಿ ಪ್ರಕರಣ ಮತ್ತೊಂದು ಸ್ಫೋಟಕ ತಿರುವು ಪಡೆದುಕೊಂಡಿದೆ. ಪ್ರಕರಣದಲ್ಲಿ ಮಾಜಿ ಸಚಿವ, ಚಿತ್ರದುರ್ಗ ಜಿಲ್ಲೆಯ ಡಿ. ಸುಧಾಕರ್ ಜತೆ ಯುವತಿ ದೂರವಾಣಿಯಲ್ಲಿ ಮಾತಾಡಿರುವುದು ಎಸ್‌ಐಟಿ ತನಿಖೆಯಲ್ಲಿ ಬೆಳಕಿಗೆ ಬಂದಿದೆ.



• ರಮೇಶ್ ಪ್ರಕರಣಕ್ಕೆ ಸ್ಫೋಟಕ ತಿರುವು

ಇದೇ ವೇಳೆ ಸಿಡಿ ಯುವತಿಯನ್ನು ಶನಿವಾರವೂ ಎಸ್‌ಐಟಿ ಅಧಿಕಾರಿಗಳು ಐದು ಗಂಟೆಗಳ ಕಾಲ ವಿಚಾರಣೆ ನಡೆಸಿದ್ದಾರೆ. ಮತ್ತೊಂದೆಡೆ ಪ್ರಕರಣಕ್ಕೆ ಸಂಬಂಧಿಸಿದಂತೆ ಮಾಜಿ ಸಚಿವ ರಮೇಶ್ ಜಾರಕಿಹೊಳಿ ಅವರನ್ನು ವಶಕ್ಕೆ ಪಡೆಯುವ ಸಾಧ್ಯತೆಗಳಿವೆ ಎಂದು ಹೇಳಲಾಗಿದೆ.

ಸಿಡಿ ಯುವತಿಯ ಜತೆ ಸುಧಾಕರ್ ಅವರು ಸಾಕಷ್ಟು ಬಾರಿ ಕಾಲ್ ಮಾಡಿರುವುದು ಸಿಡಿಆರ್‌ನಲ್ಲಿ ಬೆಳಕಿಗೆ ಬಂದಿದ್ದು ಸಿಡಿ ಬಿಡುಗಡೆಗೂ ಮೊದಲು ಯುವತಿಯ ಜತೆ ಮಾಜಿ ಸಚಿವರು ಹಣಕಾಸಿನ ವ್ಯವಹಾರ ನಡೆಸಿದ್ದಾರೆ ಎಂದು ಹೇಳಲಾಗಿದೆ. 2008ರಲ್ಲಿ ಪಕ್ಷೇತರ ಶಾಸಕರಾಗಿ ಆಯ್ಕೆಯಾಗಿದ್ದ ಡಿ.ಸುಧಾಕರ್, ಆಗಿನ ಬಿಎಸ್‌ವೈ ಸರ್ಕಾರದಲ್ಲಿ ಮಂತ್ರಿಯಾಗಿದ್ದರು. ಬಳಿಕ ಕಾಂಗ್ರೆಸ್‌ಗೆ ಹೋದ ಅವರು, 2013ರಲ್ಲಿ ಚಳ್ಳಕೆರೆ ಕ್ಷೇತ್ರದಿಂದ ಮತ್ತು 2018ರಲ್ಲಿ ಹಿರಿಯೂರು ಕ್ಷೇತ್ರದಲ್ಲಿ ಸ್ಪರ್ಧಿಸಿದ್ದರು.

▶ 7ನೇ ಪುಟಕ್ಕೆ

## ರಮೇಶ್ ವಶಕ್ಕೆ?

ಸಿಡಿ ಯುವತಿ ರಮೇಶ್ ಜಾರಕಿಹೊಳಿ ವಿರುದ್ಧ ಕಬ್ಬನ್‌ಪಾರ್ಕ್ ಪೊಲೀಸ್ ಠಾಣೆಯಲ್ಲಿ ದೂರು ನೀಡಿದ್ದು ಐಪಿಸಿ ಸೆಕ್ಷನ್ 376(ಸಿ) ಅಡಿ ಎಫ್‌ಐಆರ್ ದಾಖಲಾಗಿದೆ. ಹೀಗಾಗಿ ಯುವತಿಯ ವೈದ್ಯಕೀಯ ಪರೀಕ್ಷೆ ನಡೆದ ಬೆನ್ನಲ್ಲೇ ಮಾಜಿ ಸಚಿವರನ್ನೂ ವೈದ್ಯಕೀಯ ತಪಾಸಣೆಗೆ ಒಳಪಡಿಸಲು ಎಸ್‌ಐಟಿ ಮುಂದಾಗಿತ್ತು. ಆದರೆ, ರಮೇಶ್ ಜಾರಕಿಹೊಳಿ ಅನಾರೋಗ್ಯದ ನೆಪವೊಡ್ಡಿ ಶುಕ್ರವಾರ ವಿಚಾರಣೆಗೆ ಗೈರಾಗಿದ್ದರು. ಹೀಗಾಗಿ ಸದ್ಯದಲ್ಲೇ ಅವರನ್ನು ವಶಕ್ಕೆ ಪಡೆದು ವಿಚಾರಣೆಗೆ ಒಳಪಡಿಸಿ ವೈದ್ಯಕೀಯ ತಪಾಸಣೆ ನಡೆಸುವ ಸಾಧ್ಯತೆಗಳಿವೆ ಎಂದು ಮೂಲಗಳಿಂದ ತಿಳಿದು ಬಂದಿದೆ.

4

# ಡಿ.ಸುಧಾಕರ್‌ಗೆ ಸಿಡಿ ಕಂಟಕ

**1ನೇ ಪುಟದಿಂದ ▸** **ಸಂಬಂಧವಿಲ್ಲ:** ಪ್ರಕರಣ ಕುರಿತು ಮಾಧ್ಯಮಕ್ಕೆ ಪ್ರತಿಕ್ರಿಯೆ ನೀಡಿದ ಮಾಜಿ ಸಚಿವ ಡಿ.ಸುಧಾಕರ್, ಎಸ್‌ಐಟಿಯವರು ಶುಕ್ರವಾರ ಕರೆ ಮಾಡಿದ್ದರು. ಸೋಮವಾರ ಅಥವಾ ಮಂಗಳವಾರ ಫೋನ್ ಮಾಡಿ ಬರುತ್ತೇನೆ. ಆ ಯುವತಿ ಜತೆ ನನಗೆ ಸಂಬಂಧವಿಲ್ಲ. ಹಣಕಾಸು ನಂಟು ಕೂಡ ಇಲ್ಲ. ನಾನು ಒಬ್ಬ ಮಾಜಿ ಸಚಿವ. ಒಬ್ಬ ವ್ಯಾಪಾರಸ್ಥ ಕೂಡ. ನನಗೆ ಹತ್ತಾರು ಕರೆಗಳು ಬರುತ್ತವೆ. ಆಕೆಯೂ ಕರೆ ಮಾಡಿರಬಹುದು. ಆಕೆಗೆ ಹತ್ತು ರೂಪಾಯಿ ಕೂಡ ಕೊಟ್ಟಿಲ್ಲ. ರಮೇಶ್ ಜಾರಕಿಹೊಳಿ ಆಪ್ತ ಸ್ನೇಹಿತರು. ಸಿಡಿ ಯುವತಿಗೂ ನನಗೂ ಯಾವುದೇ ಸಂಬಂಧವಿಲ್ಲ. ಎಸ್‌ಐಟಿ ಯಾವ ವಿಚಾರಕ್ಕೆ ಕರೆ ಮಾಡಿದ್ದಾರೆ ಎಂಬ ಬಗ್ಗೆ ಗೊತ್ತಾಗಿಲ್ಲ ಎಂದಿದ್ದಾರೆ.

**35 ಬಾರಿ ಕರೆ?:** ಕೊರೊನಾ ಲಾಕ್‌ಡೌನ್ ಸಂದರ್ಭದಲ್ಲಿ ಮಾಜಿ ಸಚಿವರು 35ಕ್ಕೂ ಅಧಿಕ ಬಾರಿ ಸಿಡಿ ಯುವತಿ ಜತೆ ಮಾತುಕತೆ ನಡೆಸಿದ್ದಾರೆ. ಈ ಹಿನ್ನೆಲೆಯಲ್ಲಿ ಯುವತಿ ಬ್ಲ್ಯಾಕ್‌ಮೇಲ್ ಮಾಡಿ ಸುಧಾಕರ್ ಅವರಿಂದ ಹಣ ಪಡೆದಿರುವ ಸಾಧ್ಯತೆಗಳಿವೆ ಎಂದು ಹೇಳಲಾಗಿದೆ. ಆದರೆ, ಈ ಬಗ್ಗೆ ಎಸ್‌ಐಟಿ ಅಧಿಕಾರಿಗಳು ಮಾಹಿತಿ ನೀಡಲು ನಿರಾಕರಿಸಿದರು. ಸಿಡಿ ಯುವತಿಯ ಬಳಿ 2 ಮೊಬೈಲ್‌ಗಳಿದ್ದು, ಒಂದು ಮೊಬೈಲ್‌ನಲ್ಲಿ ಈ ಮಾಜಿ ಸಚಿವರು ಸೇರಿ ಪ್ರತಿಷ್ಠಿತ ವ್ಯಕ್ತಿಗಳು, ರಾಜಕಾರಣಿಗಳ ನಂಬರ್‌ಗಳು ಪತ್ತೆಯಾಗಿದೆ. ಮತ್ತೊಂದು ಮೊಬೈಲ್‌ನಲ್ಲಿ ಆಕೆಯ ಸ್ನೇಹಿತರು, ಪರಿಚಿತರು, ಸಂಬಂಧಿಕರ ಮೊಬೈಲ್ ನಂಬರ್‌ಗಳು ಸಿಕ್ಕಿವೆ ಎಂದು ಹೇಳಲಾಗಿದೆ.

**ಮತ್ತೊಬ್ಬ ಮಾಜಿ ಶಾಸಕ ಖೆಡ್ಡಾಕ್ಕೆ?:** ಮೈಸೂರು ಭಾಗದ ರಾಷ್ಟ್ರೀಯ ಪಕ್ಷವೊಂದರ ಮಾಜಿ ಶಾಸಕ ಹಾಗೂ ರಿಯಲ್ ಎಸ್ಟೇಟ್ ಉದ್ಯಮಿಯೊಬ್ಬರು ಸಹ ಯುವತಿ ಜತೆ ಹಣಕಾಸು ವ್ಯವಹಾರ ನಡೆಸಿದ್ದಾರೆ ಎಂಬುದು ತನಿಖೆಯಲ್ಲಿ ಬೆಳಕಿಗೆ ಬಂದಿದೆ. ಯುವತಿಯ ಚಟುವಟಿಕೆಗಳು ಗಮನಿಸಿದರೆ ದೊಡ್ಡ ಮಟ್ಟದ ಜಾಲವೊಂದು ಯುವತಿಯನ್ನು ಮುಂದಿಟ್ಟುಕೊಂಡು ರಾಜಕಾರಣಿಗಳು, ಉದ್ಯಮಿಗಳು, ಪ್ರತಿಷ್ಠಿತ ವ್ಯಕ್ತಿಗಳನ್ನು ಹನಿಟ್ರ್ಯಾಪ್ ಮಾಡುತ್ತಿತ್ತಾ? ಎಂದು ಎಸ್‌ಐಟಿ ಅನುಮಾನ ವ್ಯಕ್ತಪಡಿಸಿದೆ.

**ಮೂವರಿಗೆ ನೋಟಿಸ್?:** ಸಿಡಿ ಯುವತಿ ಜತೆ ಸಂಪರ್ಕದಲ್ಲಿದ್ದರೂ ಎಂದು ಹೇಳಲಾದ ಮಾಜಿ ಸಚಿವ ಡಿ.ಸುಧಾಕರ್, ಮಾಜಿ ಶಾಸಕ ಹಾಗೂ ರಿಯಲ್ ಎಸ್ಟೇಟ್ ಉದ್ಯಮಿಗೆ ಎಸ್‌ಐಟಿ ತನಿಖಾಧಿಕಾರಿಗಳು ಸದ್ಯದಲ್ಲೇ ನೋಟಿಸ್ ಜಾರಿ ಮಾಡಿ ವಿಚಾರಣೆ ನಡೆಸುವ ಸಾಧ್ಯತೆಗಳಿವೆ ಎಂದು ಹೇಳಲಾಗಿದೆ.